**National**
**Kannada**
**22.04.2025 / 19.35 hrs**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಕಾಶ್ಮೀರದ ಪಹಲ್ಗಾಮ್‌ನಲ್ಲಿ ಭಯೋತ್ಪಾದಕ ದಾಳಿ; ಕರ್ನಾಟಕದ ಉದ್ಯಮಿ ಸಾವು, ಇತರೆ ೧೨ ಪ್ರವಾಸಿಗರಿಗೆ ಗಾಯ

೨. ರೋಮ್‌ನಲ್ಲಿ ಇದೇ ಶನಿವಾರ ಪೋಪ್ ಫ್ರಾನ್ಸಿಸ್ ಅವರ ಅಂತ್ಯಕ್ರಿಯೆ

೩. ಸೌದಿ ಅರೇಬಿಯಾಗೆ ಎರಡು ದಿನಗಳ ಪ್ರವಾಸದ ಹಿನ್ನೆಲೆಯಲ್ಲಿ ಜೆಡ್ಡಾ ತಲುಪಿದ ಪ್ರಧಾನಿ ನರೇಂದ್ರ ಮೋದಿ

೪. ಯುಪಿಎಸ್‌ಸಿ ನಾಗರಿಕ ಸೇವಾ ಪರೀಕ್ಷೆಗಳ ಫಲಿತಾಂಶ ಪ್ರಕಟ; ಪ್ರಥಮ ರ್‍ಯಾಂಗ್ ಪಡೆದ ಶಕ್ತಿ ದುಬೆ

೫. ಐಪಿಎಲ್ ಟಿ-೨೦ ಕ್ರಿಕೆಟ್; ಲಕ್ನೋ ಸೂಪರ್ ಜೈಂಟ್ಸ್ ವಿರುದ್ಧ ಟಾಸ್ ಗೆದ್ದ ಡೆಲ್ಲಿ ಕ್ಯಾಪಿಟಲ್ಸ್ ಫೀಲ್ಡಿಂಗ್ ಆಯ್ಕೆ

**<><*<><>*><>**

ಜಮ್ಮು-ಕಾಶ್ಮೀರದ ಅನಂತನಾಗ್ ಜಿಲ್ಲೆಯ ಪಹಲ್ಗಾಮ್ ಪ್ರದೇಶದಲ್ಲಿ ಭಯೋತ್ಪಾದಕರು ಪ್ರವಾಸಿಗರ ಗುಂಪೊಂದರ ಮೇಲೆ ನಡೆಸಿದ ದಾಳಿಯಲ್ಲಿ ಕರ್ನಾಟಕದ ಒಬ್ಬರು ಮೃತಪಟ್ಟಿದ್ದು, ಘಟನೆಯಲ್ಲಿ ಇತರೆ ೧೨ ಪ್ರವಾಸಿಗರು ಗಾಯಗೊಂಡಿದ್ದಾರೆ. ಶ್ರೀನಗರದಿಂದ ಸುಮಾರು ೪೫ ಕಿಲೋಮೀಟರ್ ದೂರದಲ್ಲಿರುವ ಪಹಲ್ಗಾಮ್‌ನ ಬೈಸಾರನ್ ಅರಣ್ಯ ಪ್ರದೇಶದಲ್ಲಿ ಈ ದಾಳಿ ನಡೆದಿದೆ. ಗಾಯಗೊಂಡವರನ್ನು ಪಹಲ್ಗಾಮ್ ಆಸ್ಪತ್ರೆಗೆ ಹಾಗೂ ತೀವ್ರವಾಗಿ ಗಾಯಗೊಂಡವರನ್ನು ಶ್ರೀನಗರದ ಆಸ್ಪತ್ರೆಗೆ ರವಾನಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ದಾಳಿ ನಡೆದ ಸುತ್ತಮುತ್ತಲಿನ ಪ್ರದೇಶದಲ್ಲಿ ಭದ್ರತಾ ಪಡೆಗಳು ಶೋಧ ಕಾರ್ಯಾಚರಣೆ ತೀವ್ರಗೊಳಿಸಿದ್ದು, ಹೆಚ್ಚಿನ ಮಾಹಿತಿ ಲಭ್ಯವಾಗಬೇಕಿದೆ.

**<><*<><>*><>**

ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯನ್ನು ಪ್ರಧಾನಿ ನರೇಂದ್ರ ಮೋದಿ ಖಂಡಿಸಿದ್ದಾರೆ. ಈ ಘೋರ ಕೃತ್ಯದ ಹಿಂದಿರುವವರನ್ನು ನ್ಯಾಯದ ಕಟಕಟೆಗೆ ತರಲಾಗುವುದು ಮತ್ತು ಅವರನ್ನು ಯಾವುದೇ ಕಾರಣಕ್ಕೂ ಬಿಡಲಾಗುವುದಿಲ್ಲ ಎಂದು ಹೇಳಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ, ದುಷ್ಟ ಕಾರ್ಯಸೂಚಿ ಎಂದಿಗೂ ಯಶಸ್ವಿಯಾಗುವುದಿಲ್ಲ. ಭಯೋತ್ಪಾದನೆಯ ವಿರುದ್ಧ ಹೋರಾಡುವ ದೇಶದ ಸಂಕಲ್ಪ ಅಚಲವಾಗಿದ್ದು, ಅದು ಇನ್ನಷ್ಟು ಬಲಗೊಳ್ಳುತ್ತದೆ ಎಂದು ಅವರು ಹೇಳಿದರು. ಮೃತರ ಕುಟುಂಬಕ್ಕೆ ಸಾಂತ್ವನ ಹೇಳಿದ ಅವರು, ಗಾಯಗೊಂಡವರು ಆದಷ್ಟು ಬೇಗ ಚೇತರಿಸಿಕೊಳ್ಳಲಿ ಎಂದು ಪ್ರಾರ್ಥಿಸಿದರು. ಸಂತ್ರಸ್ತರಿಗೆ ಸಾಧ್ಯವಿರುವ ಎಲ್ಲ ಸಹಾಯವನ್ನು ನೀಡಲಾಗುತ್ತಿದೆ ಎಂದು ಪ್ರಧಾನಿ ಮೋದಿ ಹೇಳಿದರು.

**<><*<><>*><>**

ಜಮ್ಮು-ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯ ಕುರಿತು ಪ್ರಧಾನಿ ನರೇಂದ್ರ ಮೋದಿ ಅವರು, ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರೊಂದಿಗೆ ಚರ್ಚಿಸಿದ್ದಾರೆ. ಈ ಘಟನೆಯ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಹಾಗೂ ಸ್ಥಳಕ್ಕೆ ಭೇಟಿ ನೀಡುವಂತೆ ಪ್ರಧಾನಿಯವರು ಗೃಹ ಸಚಿವರಿಗೆ ನಿರ್ದೇಶನ ನೀಡಿದ್ದಾರೆ ಎಂದು ಅಧಿಕೃತ ಮೂಲಗಳು ತಿಳಿಸಿವೆ. ಇನ್ನೊಂದೆಡೆ ಪ್ರವಾಸಿಗರ ಮೇಲೆ ನಡೆದ ಭಯೋತ್ಪಾದಕ ದಾಳಿಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ದುಃಖ ವ್ಯಕ್ತಪಡಿಸಿದ್ದಾರೆ. ದಾಳಿಕೋರರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ಅವರನ್ನು ಯಾವುದೇ ಕಾರಣಕ್ಕೂ ಸುಮ್ಮನೆ ಬಿಡುವುದಿಲ್ಲ. ಕೂಡಲೇ ಶ್ರೀನಗರಕ್ಕೆ ತೆರಳಿ, ಭದ್ರತೆಗೆ ಸಂಬಂಧಿಸಿದಂತೆ ಭದ್ರತಾ ಸಂಸ್ಥೆಗಳೊಂದಿಗೆ ತುರ್ತು ಸಭೆ ನಡೆಸಲಾಗುವುದು ಎಂದು ಸಚಿವ ಅಮಿತ್ ಶಾ ತಿಳಿಸಿದ್ದಾರೆ.

**<><*<><>*><>**

ಪೋಪ್ ಫ್ರಾನ್ಸಿಸ್ ಅವರ ಅಂತ್ಯಕ್ರಿಯೆ ಶನಿವಾರ ನಡೆಯಲಿದೆ. ರೋಮ್‌ನ ಸೇಂಟ್ ಮೇರಿ ಮೇಜರ್ ಬೆಸಿಲಿಕಾದಲ್ಲಿ ಅಂತ್ಯಕ್ರಿಯೆ ನೆರವೇರಲಿದೆ ಎಂದು ವ್ಯಾಟಿಕನ್ ತಿಳಿಸಿದೆ. ವಿಶ್ವ ನಾಯಕರು ಹಾಗೂ ಗಣ್ಯರು ಪೋಪ್ ಅಂತ್ಯಕ್ರಿಯೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ವ್ಯಾಟಿಕನ್ ನಗರದ ಸೇಂಟ್ ಪೀಟರ್ಸ್ ಬೆಸಿಲಿಕಾದಲ್ಲಿ ನಾಳೆ ಪೋಪ್ ಅವರ ಪಾರ್ಥೀವ ಶರೀರರವನ್ನು ಸಾರ್ವಜನಿಕ ದರ್ಶನಕ್ಕಿಡಲಾಗುವುದು. ವ್ಯಾಟಿಕನ್‌ನ ಸೇಂಟ್ ಪೀಟರ್ಸ್ ಬೆಸಿಲಿಕಾದಲ್ಲಿ ಪೋಪ್ ಅವರ ಅಂತ್ಯಕ್ರಿಯೆ ನೆರೆವೇರಿಸದೇ ಇರುವುದು ಒಂದು ಶತಮಾನಕ್ಕೂ ಹೆಚ್ಚು ಅವಧಿಯಲ್ಲಿ ಇದೇ

ಮೊದಲು. ತಮ್ಮ ನೆಚ್ಚಿನ ಐಕಾನ್ ಮಡೋನಾ ಅವರ ಸಮಾಧಿ ಬಳಿ ರೋಮ್‌ನ ಸೇಂಟ್ ಮೇರಿ ಮೇಜರ್ ಬೆಸಿಲಿಕಾದಲ್ಲಿ ಪೋಪ್ ಫ್ರಾನ್ಸಿಸ್ ಅವರ ಅಂತ್ಯಕ್ರಿಯೆ ನೆರವೇರಲಿದೆ. ಪಾರ್ಶ್ವವಾಯುಗೆ ತುತ್ತಾಗಿದ್ದ ಪೋಪ್ ಫ್ರಾನ್ಸಿಸ್ ಅವರು ತಮ್ಮ ೮೮ ವಯಸ್ಸಿನಲ್ಲಿ ವ್ಯಾಟಿಕನ್ ನಗರದ ತಮ್ಮ ನಿವಾಸದಲ್ಲಿ ನಿನ್ನೆ ನಿಧನರಾದರು. ಅವರ ಅಂತಿಮ ದರ್ಶನಕ್ಕಾಗಿ ಲಕ್ಷಾಂತರ ಜನರು ವ್ಯಾಟಿಕನ್ ನಗರಕ್ಕೆ ಆಗಮಿಸುವ ನಿರೀಕ್ಷೆಯಿದೆ. ಶನಿವಾರದ ನಂತರ ಮುಂದಿನ ೯ ದಿನಗಳ ಕಾಲ ಶೋಕಾಚರಣೆ ಘೋಷಿಸಲಾಗಿದೆ ಎಂದು ವ್ಯಾಟಿಕನ್ ತಿಳಿಸಿದೆ.

<><*<><>*><>

ಪ್ರಧಾನಿ ನರೇಂದ್ರ ಮೋದಿ ಅವರು, ಸೌದಿ ಅರೇಬಿಯಾಗೆ ಎರಡು ದಿನಗಳ ಅಧಿಕೃತ ಭೇಟಿಗಾಗಿ ಇಂದು ಜೆಡ್ಡಾಗೆ ಆಗಮಿಸಿದರು. ವಿಮಾನ ನಿಲ್ದಾಣದಲ್ಲಿ ಅವರಿಗೆ ಗೌರವ ರಕ್ಷೆ ನೀಡಲಾಯಿತು. ವಿಶೇಷವಾಗಿ ಪ್ರಧಾನಿ ನರೇಂದ್ರ ಮೋದಿ ಅವರ ವಿಮಾನ, ಸೌದಿ ವಾಯು ಪ್ರದೇಶ ಪ್ರವೇಶಿಸಿದಾಗ ಅವರಿಗೆ ರಾಯಲ್ ಸೌದಿ ವಾಯುಪಡೆಯ ಎಫ್-೧೫ ಯುದ್ಧ ವಿಮಾನಗಳು ಅವರಿಗೆ ಬೆಂಗಾವಲು ನೀಡಿದವು. ಸೌದಿ ಅರೇಬಿಯಾ ರಾಜಕುಮಾರ್ ಮೊಹಮ್ಮದ್ ಬಿನ್ ಸಲ್ಮಾನ್ ಆಹ್ವಾನದ ಮೇರೆಗೆ ಪ್ರಧಾನಿ ನರೇಂದ್ರ ಮೋದಿ ಅವರ ಮೂರನೇ ಅಧಿಕೃತ ಭೇಟಿ ಇದಾಗಿದೆ. ಭಾರತ ಮತ್ತು ಸೌದಿ ಅರೇಬಿಯಾ ನಡುವೆ ಬಲಿಷ್ಠಗೊಳ್ಳುತ್ತಿರುವ ವ್ಯೂಹಾತ್ಮಕ ಪಾಲುದಾರಿಕೆಯ ಸಂಕೇತ ಇದಾಗಿದೆ.

<><*<><>*><>

ಕೇಂದ್ರ ಲೋಕಸೇವಾ ಆಯೋಗ- ಯುಪಿಎಸ್‌ಸಿ, ೨೦೨೪ರ ನಾಗರಿಕ ಸೇವಾ ಪರೀಕ್ಷೆಗಳ ಅಂತಿಮ ಫಲಿತಾಂಶವನ್ನು ಪ್ರಕಟಿಸಿದೆ. ೭೨೫ ಪುರುಷರು ಮತ್ತು ೨೮೪ ಮಹಿಳೆಯರು ಸೇರಿದಂತೆ ಒಟ್ಟು ಒಂದು ಸಾವಿರದ ೯ ಅಭ್ಯರ್ಥಿಗಳ ನೇಮಕಕ್ಕೆ ಯುಪಿಎಸ್‌ಸಿ ಶಿಫಾರಸು ಮಾಡಿದೆ. ಅಗ್ರ ೨೫ ಅಭ್ಯರ್ಥಿಗಳಲ್ಲಿ ೧೧ ಮಹಿಳೆಯರು ಮತ್ತು ೧೪ ಪುರುಷರಿದ್ದಾರೆ. ಇದೇ ರೀತಿ ಅಗ್ರ ಐವರು ಅಭ್ಯರ್ಥಿಗಳಲ್ಲಿ ಮೂವರು ಮಹಿಳೆಯರು ಮತ್ತು ಇಬ್ಬರು ಪುರುಷರಿದ್ದಾರೆ. ೨೦೨೪ರ ನಾಗರಿಕ ಸೇವಾ ಪರೀಕ್ಷೆಯಲ್ಲಿ ಶಕ್ತಿ ದುಬೆ ಅಗ್ರ ಶ್ರೇಯಾಂಕಿತರಾಗಿದ್ದಾರೆ. ಅಗ್ರ ೫೦ರ ಶ್ರೇಣಿಯೊಳಗೆ ರಾಜ್ಯದ ಇಬ್ಬರು ವೈದ್ಯರು ಆಯ್ಕೆಯಾಗಿದ್ದಾರೆ. ರಾಜ್ಯದ ಆರ್.ರಂಗಮಂಜು ೨೪ನೇ ಶ್ರೇಣಿಯಲ್ಲಿ ತೇರ್ಗಡೆ ಹೊಂದಿದ್ದಾರೆ. ಡಾ. ಸಚಿನ್ ಹರಿಹರ ೪೧ ನೇ ರ್‍ಯಾಂಕ್ ಗಳಿಸಿದ್ದಾರೆ. ಉಳಿದಂತೆ ರಾಜ್ಯದ ಸುಮಾರು ೨೫ಕ್ಕೂ ಹೆಚ್ಚು ಮಂದಿ ಉತ್ತೀರ್ಣರಾಗಿದ್ದಾರೆ. ಕೋಲಾರ ತಾಲೂಕಿನ ಇರಗಸಂದ್ರ ಗ್ರಾಮದ ಎ.ಮಧು. ಮೂರು ಬಾರಿ ಯುಪಿಎಸ್ಸಿ ಸಂದರ್ಶನ ಎದುರಿಸಿ, ನಾಲ್ಕನೇ ಬಾರಿಗೆ ಯಶಸ್ಸು ಸಾಧಿಸಿದ್ದಾರೆ. ಸಾಗರದ ವಿಕಾಸ್ ೨೮೮ನೇ ರ್‍ಯಾಂಕ್‌ನೊಂದಿಗೆ ಮೊದಲ

ಪ್ರಯತ್ನದಲ್ಲೇ ಆಯ್ಕೆಯಾಗಿದ್ದಾರೆ. ಪ್ರಸ್ತುತ ಅವರು ದೆಹಲಿಯ ಡಿಆರ್‌ಡಿಒ ದಲ್ಲಿ ವಿಜ್ಞಾನಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಕಳೆದ ವರ್ಷ ಸೆಪ್ಟಂಬರ್‌ನಲ್ಲಿ ಲಿಖಿತ ಪರೀಕ್ಷೆ ನಡೆಸಲಾಗಿತ್ತು. ನಂತರ ಈ ವರ್ಷದ ಜನವರಿ ಮತ್ತು ಏಪ್ರಿಲ್ ನಡುವೆ ಸಂದರ್ಶನ ಏರ್ಪಡಿಸಲಾಗಿತ್ತು.

<><*<><>*><>

ಮುಂದಿನ ಶತಮಾನದ ಭವಿಷ್ಯ ಭಾರತ ಮತ್ತು ಅಮೆರಿಕಾ ಹಂಚಿಕೊಳ್ಳುವ ವಾಣಿಜ್ಯ ಸಂಬಂಧಗಳ ಮೇಲೆ ಅವಲಂಬಿಸಿದೆ ಎಂದು ಅಮೆರಿಕಾದ ಉಪಾಧ್ಯಕ್ಷ ಜೆ.ಡಿ.ವ್ಯಾನ್ಸ್ ಹೇಳಿದ್ದಾರೆ. ಅವರು, ಭಾರತ ಮತ್ತು ಅಮೆರಿಕಾ ನಡುವೆ ವ್ಯಾಪಾರ ಮಾತುಕತೆಯನ್ನು ಅಧಿಕೃತವಾಗಿ ಅಂತಿಮಗೊಳಿಸಿದ್ದು, ಎರಡು ದೇಶಗಳ ನಡುವೆ ವಾಣಿಜ್ಯ ಮಾರ್ಗಸೂಚಿಯನ್ನು ಸಿದ್ಧಪಡಿಸುತ್ತದೆ ಎಂದು ತಿಳಿಸಿದರು. ರಾಜಸ್ಥಾನದ ಜೈಪುರದ ಅಂತಾರಾಷ್ಟ್ರೀಯ ಕೇಂದ್ರದಲ್ಲಿಂದು ವ್ಯಾಪಾರ ಶೃಂಗಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಜೆ.ಡಿ.ವ್ಯಾನ್ಸ್, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ತೆರಿಗೆ ನೀತಿಯನ್ನು ಟೀಕಿಸಲಾಗುತ್ತಿದೆ. ಆದರೆ, ಈ ತೆರಿಗೆ ನೀತಿಯು ಸಮತೋಲಿತ ವ್ಯಾಪಾರವನ್ನು ಸೃಷ್ಟಿಸಿದೆ ಎಂದು ಹೇಳಿದರು.

<><*<><>*><>

ಮುಂದಿನ ಶತಮಾನದ ಭವಿಷ್ಯ ಭಾರತ ಮತ್ತು ಅಮೆರಿಕಾ ಹಂಚಿಕೊಳ್ಳುವ ವಾಣಿಜ್ಯ ಸಂಬಂಧಗಳ ಮೇಲೆ ಅವಲಂಬಿಸಿದೆ ಎಂದು ಅಮೆರಿಕಾದ ಉಪಾಧ್ಯಕ್ಷ ಜೆ.ಡಿ.ವ್ಯಾನ್ಸ್ ಹೇಳಿದ್ದಾರೆ. ಅವರು, ಭಾರತ ಮತ್ತು ಅಮೆರಿಕಾ ನಡುವೆ ವ್ಯಾಪಾರ ಮಾತುಕತೆಯನ್ನು ಅಧಿಕೃತವಾಗಿ ಅಂತಿಮಗೊಳಿಸಿದ್ದು, ಎರಡು ದೇಶಗಳ ನಡುವೆ ವಾಣಿಜ್ಯ ಮಾರ್ಗಸೂಚಿಯನ್ನು ಸಿದ್ಧಪಡಿಸುತ್ತದೆ ಎಂದು ತಿಳಿಸಿದರು. ರಾಜಸ್ಥಾನದ ಜೈಪುರದ ಅಂತಾರಾಷ್ಟ್ರೀಯ ಕೇಂದ್ರದಲ್ಲಿಂದು ವ್ಯಾಪಾರ ಶೃಂಗಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಜೆ.ಡಿ.ವ್ಯಾನ್ಸ್, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ತೆರಿಗೆ ನೀತಿಯನ್ನು ಟೀಕಿಸಲಾಗುತ್ತಿದೆ. ಆದರೆ, ಈ ತೆರಿಗೆ ನೀತಿಯು ಸಮತೋಲಿತ ವ್ಯಾಪಾರವನ್ನು ಸೃಷ್ಟಿಸಿದೆ ಎಂದು ಹೇಳಿದರು.

<><*<><>*><>

ಜನಪ್ರತಿನಿಧಿಗಳು ಸಂವಿಧಾನದಲ್ಲಿ ಏನಿರಬೇಕೆಂದು ನಿರ್ಧರಿಸುವ ಅಂತಿಮ ನಿರ್ಣಾಯಕರು ಎಂದು ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಅಭಿಪ್ರಾಯಪಟ್ಟಿದ್ದಾರೆ. ದೆಹಲಿ ವಿಶ್ವವಿದ್ಯಾನಿಲಯದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, ಪ್ರತಿಯೊಬ್ಬ ವ್ಯಕ್ತಿಯ ಹಾಗೆ, ಸಂಸತ್ ಕೂಡ ಅಷ್ಟೇ ಪ್ರಾಮುಖ್ಯ ಹೊಂದಿದೆ ಎಂದು ಹೇಳಿದರು. ಜನತೆ, ಸಂವಿಧಾನದ ಅಡಿಯಲ್ಲಿ ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಲು ತಮ್ಮ ಪ್ರತಿನಿಧಿಗಳನ್ನು ಆಯ್ಕೆ ಮಾಡುತ್ತಾರೆ. ಜನಪ್ರತಿನಿಧಿಗಳು, ತಮ್ಮ ಆಸೆ ಆಕಾಂಕ್ಷೆಗಳಿಗೆ ಈಡೇರಿಸಿದ್ದಾರೆಯೇ ಎಂಬುದನ್ನು ಚುನಾವಣೆಯ ಸಂದರ್ಭದಲ್ಲಿ ಜನತೆ ಗಮನಿಸುತ್ತಾರೆ ಎಂದರು. ಸಂವಿಧಾನ ಜನರಿಗಾಗಿಯೇ ಇದೆ. ಅದನ್ನು ರಕ್ಷಿಸುವ ಜವಾಬ್ದಾರಿ ಚುನಾಯಿತ ಪ್ರತಿನಿಧಿಗಳದ್ದಾಗಿದೆ ಎಂದು ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಹೇಳಿದರು.

<><*<><>*><>

ಈ ವರ್ಷ ನವೋದ್ಯಮಗಳು ಸೇರಿದಂತೆ ಪರಮಾಣು ವಲಯದಲ್ಲಿ ಹೂಡಿಕೆಗೆ ಅವಕಾಶ ನೀಡಲಾಗುವುದು ಎಂದು ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಜಿತೇಂದ್ರ ಸಿಂಗ್ ತಿಳಿಸಿದ್ದಾರೆ. ಹೈದರಾಬಾದ್‌ನಲ್ಲಿಂದು ಇದೇ ಮೊದಲ ಬಾರಿಗೆ ಆಯೋಜಿಸಿದ್ದ ಸಿಎಸ್‌ಐಆರ್ ನವೋದ್ಯಮ ಸಮ್ಮೇಳನ ಉದ್ಘಾಟಿಸಿ ಮಾತನಾಡಿದ ಅವರು, ದೇಶದ ವಿವಿಧ ಸಂಶೋಧನಾ ಸಂಸ್ಥೆಗಳ ನಡುವೆ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವಾಲಯದೊಳಗೆ ಹೆಚ್ಚಿನ ಸಮನ್ವಯದ ಅಗತ್ಯವಿದೆ. ಸಾಮಾನ್ಯ ಜನರಿಗೆ ಪ್ರಯೋಜನವಾಗುವಂತೆ ಸಂಶೋಧನೆಯ ಫಲವನ್ನು ತರುವ ಸಮಗ್ರ ವಿಧಾನದ ಅಗತ್ಯವನ್ನು ಅವರು ಪ್ರತಿಪಾದಿಸಿದರು. ಮಾಹಿತಿಯ ಯುಗದಲ್ಲಿ, ಸಂಶೋಧನಾ ಸಂಸ್ಥೆಗಳು ಮಾಡುವಷ್ಟು ಹೂಡಿಕೆ ಮಾಡಲು ಖಾಸಗಿ ವಲಯಕ್ಕೂ ಅವಕಾಶ ನೀಡಬೇಕು. ದೇಶದ ಆರ್ಥಿಕ ಬೆಳವಣಿಗೆಯನ್ನು ವೇಗಗೊಳಿಸಲು ಮತ್ತು ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕತೆಯಾಗುವ ಗುರಿಯನ್ನು ಸಾಧಿಸಲು ನವೋದ್ಯಮಗಳ ಮೇಲೆ ಕೇಂದ್ರೀಕರಿಸಬೇಕು ಎಂದು ಸಚಿವ ಡಾ. ಜಿತೇಂದ್ರ ಸಿಂಗ್ ಹೇಳಿದರು.

<><*<><>*><>

ನ್ಯಾಷನಲ್ ಹೆರಾಲ್ಡ್ ಪ್ರಕರಣಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ವಿರುದ್ಧ ಬಿಜೆಪಿ ಇಂದು ವಾಗ್ದಾಳಿ ನಡೆಸಿದೆ. ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ವಕ್ತಾರ ನಳಿನ್ ಕೊಹ್ಲಿ, ಚುನಾವಣಾ ಆಯೋಗ ಮತ್ತು ಚುನಾವಣೆಗಳ ಪ್ರಕ್ರಿಯೆ ಕುರಿತು ಕಾಂಗ್ರೆಸ್ ಹಿರಿಯ ನಾಯಕ ರಾಹುಲ್ ಗಾಂಧಿ ಅವರ ಇತ್ತೀಚಿನ ಹೇಳಿಕೆಗಳು ಅವರ ಪಕ್ಷವು ನ್ಯಾಷನಲ್ ಹೆರಾಲ್ಡ್ ವಿಷಯದಿಂದ

ದೂರವಿರಲು ಪ್ರಯತ್ನಿಸುತ್ತಿದೆ ಎಂಬುದನ್ನು ಸೂಚಿಸುತ್ತದೆ ಎಂದು ಆರೋಪಿಸಿದರು. ಸರ್ಕಾರಿ ಸಂಸ್ಥೆಗಳ ಮೇಲೆ ವಾಗ್ದಾಳಿ ಮಾಡುವ ಮೂಲಕ ಕಾಂಗ್ರೆಸ್ ಗಮನ ಬೇರೆಡೆ ಸೆಳೆಯಲು ಪ್ರಯತ್ನಿಸುತ್ತಿದೆ ಎಂದು ನಳಿನ್ ಕೊಹ್ಲಿ ದೂರಿದರು.

<><*<><>*><>

ಲಕ್ನೊದ ಭಾರತ ರತ್ನ ಅಟಲ್ ಬಿಹಾರಿ ವಾಜಪೇಯಿ ಏಕನಾ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಇಂಡಿಯನ್ ಪ್ರೀಮಿಯರ್ ಲೀಗ್-ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಲಕ್ನೋ ಸೂಪರ್ ಜೈಂಟ್ಸ್ ಹಾಗೂ ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಡೆಲ್ಲಿ ಕ್ಯಾಪಿಟಲ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

<><*<><>*><>

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ- ಸೆನ್ಸೆಕ್ಸ್ ೧೮೭ ಅಂಕಗಳು ಏರಿಕೆಯಾಗಿದ್ದು, ದಿನದ ಅಂತ್ಯಕ್ಕೆ ೭೯ ಸಾವಿರದ ೫೯೬ ಅಂಕಗಳು ದಾಖಲಾಗಿದೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ- ನಿಫ್ಟಿ ೪೨ ಅಂಕಗಳು ಏರಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೪ ಸಾವಿರದ ೧೬೭ ಅಂಕಗಳು ದಾಖಲಾಗಿದೆ. ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿಂದು ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ೮೫ ರೂಪಾಯಿ ೧೯ ಪೈಸೆಯಷ್ಟಾಗಿದೆ.

<><*<><>*><>

ಇಂದು ವಿಶ್ವ ಭೂಮಿ ದಿನ. ಪರಿಸರ ಸಂರಕ್ಷಣೆಗೆ ಬೆಂಬಲ ಪ್ರದರ್ಶಿಸಲು ಈ ದಿನವನ್ನು ಪ್ರಪಂಚದಾದ್ಯಂತ ಆಚರಿಸಲಾಗುತ್ತಿದೆ. ೧೯೬೯ ರಲ್ಲಿ ಯುನೆಸ್ಕೋ ಶೃಂಗಸಭೆಯಲ್ಲಿ ವಿಶ್ವ ಭೂಮಿ ದಿನವನ್ನಾಗಿ ಆಚರಿಸಬೇಕೆಂಬ ಸಲಹೆ ಬಂದ ನಂತರ ೧೯೭೦ ರಲ್ಲಿ ಮೊದಲ ಭೂಮಿ ದಿನ ಆಚರಣೆಯನ್ನು ನಡೆಸಲಾಯಿತು. ಈ ವರ್ಷದ ಧ್ಯೇಯ ವಾಕ್ಯ "ನಮ್ಮ ಶಕ್ತಿ, ನಮ್ಮ ಗ್ರಹ" ಎಂಬುದಾಗಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>